ಈ) 1 ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬಸವಕಲ್ಯಾಣ ತಾಲ್ಲೂಕಿನ ಮುಡಬಿ ಮತ್ತು ರಾಜೇಶ್ವರ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಬಂದಿದೆ

2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್‌ಗೆ ಮಂಜೂರಾಗಿದೆ

605 (1055) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಂಬೇಡ್ಕರ್ ಭವನಗಳ ಸಂಖ್ಯೆ ಎಷ್ಟು?

ಆ) ಸದರಿ ಮತಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಅಂಬೇಡ್ಕರ್ ಭವನವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಇ) ಈ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮಗಳಲ್ಲಿ ಹೊಸದಾಗಿ ಅಂಬೇಡ್ಕರ್ ಭವನಗಳನ್ನು ಸ್ಥಾಪಿಸುವಂತೆ ಕೋರಿ ಸರ್ಕಾರಕ್ಕೆ ಎಷ್ಟು ಮನವಿಗಳು ಬಂದಿವೆ? (ವಿವರಗಳನ್ನು ನೀಡುವುದು)

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಬಸವಕಲ್ಯಾಣ ಮತಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಅಂಬೇಡ್ಕರ್ ಭವನಗಳ ಸಂಖ್ಯೆ–3

ಆ) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ ಮಾನ್ಯ ವಿಧಾನಸಭಾ ಸದಸ್ಯರು ಇವರಿಂದ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಅಂಬೇಡ್ಕರ್ ಬವನವನ್ನು ಸ್ಥಾಪಿಸಲು ಕೋರಿರುವ ಪ್ರಸ್ತಾವನೆಯನ್ನು ಅಂಬೇಡ್ಕರ್ ಭವನಗಳ ನಿರ್ಮಾಣ ಯೋಜನೆಯು 2005–06ನೇ ಸಾಲಿನಿಂದ ಜಿಲ್ಲಾವಲಯಕ್ಕೆ ವರ್ಗಾವಣೆಕೊಂಡಿರುವುದರಿಂದ, ಜಿಲ್ಲಾ ವಲಯದಲ್ಲಿ ಪರಿಗಣಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಬೀದರ್ ಜಿಲ್ಲೆ ಇವರಿಗೆ ಕಳುಹಿಸಿದೆ

ಇ) ಬಸವ ಕಲ್ಯಾಣ ಮತಕ್ಷೇತ್ರದ ಈ ಕೆಳಕಂಡ ಗ್ರಾಮಗಳಲ್ಲಿ ಹೊಸದಾಗಿ ಅಂಬೇಡ್ಕರ್ ಭವನಗಳನ್ನು ಸ್ಥಾಪಿಸುವಂತೆ ಈ ಮನವಿಗಳು ಬಂದಿರುತ್ತದೆ ವಿವರಗಳು ಈ ಕೆಳಗಿನಂತಿವೆ

1 ಖಂಡಾಳ

2 ಯಳವಂತಗಿ

3 ಹಳ್ಳಿ

4 ತ್ರಿಪುರಾಂತ

5 ಖಾನಪುರ (ಕೆ)

ಅಂಬೇಡ್ಕರ್ ಭವನಗಳ ನಿರ್ಮಾಣ ಕಾರ್ಯವು ಜಿಲ್ಲಾವಲಯಕ್ಕೆ ವರ್ಗಾವಣೆಗೊಂಡಿರುವುದರಿಂದ ಮೇಲೆ ಕಾಣಿಸಿರುವ ಪ್ರಸ್ತಾವನೆಗಳನ್ನು ಬೀದರ್ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕ್ರಮಕ್ಕಾಗಿ ಕಳುಹಿಸಲಾಗಿದೆ

606 (1056) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು?

ಆ) ಈ ಸಂಬಂಧವಾಗಿ ಸರ್ಕಾರಕ್ಕೆ ಎಷ್ಟು ಪ್ರಸ್ತಾವನೆಗಳು ಬಂದಿವೆ?

ಇ) ಡಾ ಡಿ ಎಂ ನಂಜುಂಡಪ್ಪನವರ ವರದಿ ಶಿಫಾರಸ್ಸಿನ ಅನ್ವಯ ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಹೊಸದಾಗಿ ಐ ಟಿ ಐ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು).

ಅ) ರಾಮನಗರ, ಮುಂಡಗೋಡು, ಶಿಕಾರಿಪುರ, ಆಲೂರು ಸಿದ್ದಾಪುರ, ಕೆ ಆರ್ ಪೇಟೆ, ಪಡವಲಹಿಪ್ಪೆ ಮತ್ತು ಗಂಗಾವತಿಗಳಲ್ಲಿ ಪ್ರಾರಂಭಿಸಲಾಗಿದೆ

ಆ) 59

ಇ) ಚಿರಾದ್ ಮತ್ತು ಭಾಲ್ಕಿ